सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಕರ್ನಾಟಕ ರಾಜ್ಯ ಸಹಕಾರ ಮಾರಾಟ
ಮಂಡಳಿ ಕಟ್ಟಡ (ಹಿಂಭಾಗ) 1ನೇ ಮಹಡಿ,
ನಂ.8, ಕನ್ನಿಂಗ್‌ಹ್ಯಾಮ್ ರಸ್ತೆ,
ಬೆಂಗಳೂರು-52, ದಿನಾಂಕ:18 -01-2017.

**ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ : ರಾಚುಆ:144 : ಇಯುಬಿ : 2016.**
**ಬೆಂಗಳೂರು, ದಿನಾಂಕ. 18-01-2017**

ಗ್ರಾಮ ಪಂಚಾಯ್ತಿಯಿಂದ ಉನ್ನತೀಕರಿಸಿದ ನಗರ ಸ್ಥಳೀಯ ಸಂಸ್ಥೆಯಾದ ಬಳ್ಳಾರಿ ಜಿಲ್ಲೆಯ ಕುಡುತಿನಿ ಪಟ್ಟಣ ಪಂಚಾಯ್ತಿಯ 19 ವಾರ್ಡ್‌ಗಳಿಗೆ ಸಾರ್ವತ್ರಿಕ ಚುನಾವಣೆಯನ್ನು ನಡೆಸಲು ರಾಜ್ಯ ಚುನಾವಣಾ ಆಯೋಗವು ಕರ್ನಾಟಕ ಮುನಿಸಿಪಾಲಿಟೀಸ್ (ಕೌನ್ಸಿಲರ್‌ಗಳ ಚುನಾವಣೆ) ನಿಯಮಗಳು, 1977 ರ ನಿಯಮ 3 (1) ರನ್ವಯ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿದೆ.

## ಚುನಾವಣಾ ವೇಳಾ ಪಟ್ಟಿ

| | | |
|---|---|---|
| 1 | ಜಿಲ್ಲಾಧಿಕಾರಿಗಳು, ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ. | 25-01-2017<br>ಬುಧವಾರ |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ. | 01-02-2017<br>ಬುಧವಾರ |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 02-02-2017<br>ಗುರುವಾರ |
| 4 | ಉಮೇದುವಾರಿಕೆಯನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ. | 04-02-2017<br>ಶನಿವಾರ |
| 5 | ಮತದಾನ ಅವಶ್ಯವಿದ್ದರೆ, ಮತದಾನ ನಡೆಸಬೇಕಾದ ದಿನಾಂಕ ಮತ್ತು ದಿನ. (ಮತದಾನದ ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆಯವರೆಗೆ) | 12-02-2017<br>ಭಾನುವಾರ |
| 6 | ಮರುಮತದಾನ ಇದ್ದಲ್ಲಿ ಮತದಾನದ ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆಯವರೆಗೆ. | 14-02-2017<br>ಮಂಗಳವಾರ |
| 7 | ಮತಎಣಿಕೆಯು ಬೆಳಿಗ್ಗೆ 8.00 ಗಂಟೆಯಿಂದ. (ತಾಲ್ಲೂಕು ಕೇಂದ್ರದಲ್ಲಿ) | 15-02-2017<br>ಬುಧವಾರ |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ. | 15-02-2017<br>ಬುಧವಾರ |

ಜಿಲ್ಲಾಧಿಕಾರಿಗಳು, ಬಳ್ಳಾರಿಜಿಲ್ಲೆ ರವರು, ಆಯೋಗವು ಆದೇಶಿಸಿರುವ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಮುನಿಸಿಪಾಲಿಟೀಸ್ (ಕೌನ್ಸಿಲರ್‌ಗಳ ಚುನಾವಣೆ) ನಿಯಮಗಳು, 1977 ರ ನಿಯಮ 8 ರ ಪ್ರಕಾರ ಅಧಿಸೂಚನೆಯನ್ನು ಪ್ರಪತ್ರ–1 ರಂತೆ ಹೊರಡಿಸತಕ್ಕದ್ದು. ಹಾಗೆಯೇ ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸತಕ್ಕದ್ದು. ಪ್ರಕಟಿತ ಅಧಿಸೂಚನೆಯನ್ನು ಜಿಲ್ಲಾಧಿಕಾರಿಗಳ ಕಛೇರಿ, ಸಂಬಂಧ ಪಟ್ಟ ನಗರ ಸ್ಥಳೀಯ ಸಂಸ್ಥೆಗಳ ಕಛೇರಿ ಹಾಗೂ ಇನ್ನಿತರ ಮುಖ್ಯ ಸ್ಥಳಗಳಲ್ಲಿಯೂ ಸಹ ಪ್ರಕಟಿಸತಕ್ಕದ್ದು. ಅಧಿಸೂಚನೆಯ ಪ್ರತಿಯನ್ನು ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಪ್ರಪತ್ರ –1 ಎ ರಲ್ಲಿ ಚುನಾವಣಾ ನೋಟೀಸನ್ನು ಪ್ರಕಟಿಸುವಂತೆ ಅವರಿಗೆ ಸೂಚನೆಗಳನ್ನು ನೀಡತಕ್ಕದ್ದು. ಚುನಾವಣೆ ನಡೆಯುವ ವಿಷಯವನ್ನು ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಹಾಗೂ ಸ್ಥಳೀಯ ಪತ್ರಿಕೆಗಳಲ್ಲಿ (ವೆಚ್ಚ ಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು, ಚುನಾವಣಾಧಿಕಾರಿ/ ಸಹಾಯಕ ಚುನಾವಣಾಧಿಕಾರಿಗಳನ್ನು ನೇಮಿಸಿ ನೇಮಕಾತಿ ಆದೇಶವನ್ನು ಆಯೋಗಕ್ಕೆ ಕಳುಹಿಸುವುದು.

ಸದಾಚಾರ ಸಂಹಿತೆಯು ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸಿದ ದಿನಾಂಕದಿಂದ ಅಂದರೆ ದಿನಾಂಕ : 25–01–2017 ರಿಂದ ಜಾರಿಗೆ ಬಂದಿದ್ದು, ಚುನಾವಣಾ ಪ್ರಕ್ರಿಯೆಯು ಮುಕ್ತಾಯಗೊಳ್ಳುವವರೆಗೆ ಅಂದರೆ ದಿನಾಂಕ. 15–02–2017 ರವರೆಗೆ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಯ ವ್ಯಾಪ್ತಿಯಲ್ಲಿ ಮಾತ್ರ ಜಾರಿಯಲ್ಲಿರುತ್ತದೆ. ಸದಾಚಾರ ಸಂಹಿತೆಯು ಯಾವುದೇ ರೀತಿಯಲ್ಲೂ ಉಲ್ಲಂಘನೆಯಾಗದಂತೆ ಜಿಲ್ಲಾಧಿಕಾರಿಯವರು ಕ್ರಮವಹಿಸತಕ್ಕದ್ದು.

' ಆದೇಶಾನುಸಾರ '

ಅಧೀನ ಕಾರ್ಯದರ್ಶಿ
ರಾಜ್ಯ ಚುನಾವಣಾ ಆಯೋಗ
18/01/17

ಪ್ರತಿಯನ್ನು :

1. ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
2. ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ರವರಿಗೆ ಈ ಆದೇಶವನ್ನು ಈ ದಿನವೇ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 10 ಪ್ರತಿಗಳನ್ನು ರಾಜ್ಯ ಚುನಾವಣಾ ಆಯೋಗಕ್ಕೆ ಕಳುಹಿಸಿಕೊಡಲು ಕೋರಿದೆ.
3. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ದಿ ಇಲಾಖೆ, ವಿಕಾಸ ಸೌಧ, ಬೆಂಗಳೂರು ರವರಿಗೆ ಮಾಹಿತಿಗಾಗಿ ಕಳುಹಿದೆ.

सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಕರ್ನಾಟಕ ರಾಜ್ಯ ಸಹಕಾರ ಮಾರಾಟ
ಮಂಡಳಿ ಕಟ್ಟಡ (ಹಿಂಭಾಗ) 1ನೇ ಮಹಡಿ
ನಂ.8, ಕನ್ನಿಂಗ್‌ಹ್ಯಾಮ್ ರಸ್ತೆ
ಬೆಂಗಳೂರು-52, ದಿನಾಂಕ: 18-01-2017

**ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ : ರಾಚುಆ : 143 : ಇಯುಬಿ : 2016.**
**ಬೆಂಗಳೂರು, ದಿನಾಂಕ. 18-01-2017**

ರಾಜ್ಯ ಚುನಾವಣಾ ಆಯೋಗವು ಕೆಳಗೆ ನಮೂದಿಸಿರುವ ನಗರ ಸ್ಥಳೀಯ ಸಂಸ್ಥೆಗಳ' ವಿವಿಧ ಕಾರಣಗಳಿಂದ ತೆರವಾಗಿರುವ ವಾರ್ಡುಗಳ ಸದಸ್ಯ ಸ್ಥಾನಗಳಿಗೆ ಉಪ ಚುನಾವಣೆಯನ್ನು ನಡೆಸಲು ಕರ್ನಾಟಕ ಮುನಿಸಿಪಾಲಿಟೀಸ್ (ಕೌನ್ಸಿಲರುಗಳ ಚುನಾವಣೆ) ನಿಯಮಗಳು 1977 ರ ನಿಯಮ 3 (1) ರಂತೆ ಚುನಾವಣಾ ವೇಳಾ ಪಟ್ಟಿಯನ್ನು ಪ್ರಕಟಿಸಿದೆ.

| ಕ್ರ.ಸಂ | ಜಿಲ್ಲೆಯ ಹೆಸರು | ನಗರ ಸ್ಥಳೀಯ ಸಂಸ್ಥೆಯ ಹೆಸರು | ವಾರ್ಡ್ ನಂ. |
|---|---|---|---|
| 1 | ದಕ್ಷಿಣ ಕನ್ನಡ ಜಿಲ್ಲೆ | 1.ಪುತ್ತೂರು ನಗರ ಸಭೆ | 6, 16, 19, 21, 22ಹಾಗೂ26 |
| | | 2.ಉಳ್ಳಾಲ ನಗರ ಸಭೆ | 24 ಹಾಗೂ 26 |
| 2 | ಮಂಡ್ಯ ಜಿಲ್ಲೆ | ನಾಗಮಂಗಲ, ಪಟ್ಟಣ ಪಂಚಾಯ್ತಿ | 13 |
| 3 | ಬಳ್ಳಾರಿ ಜಿಲ್ಲೆ | ಕಮಲಾಪುರ ಪಟ್ಟಣ ಪಂಚಾಯ್ತಿ | 18 |
| 4 | ಯಾದಗಿರಿ ಜಿಲ್ಲೆ | ಶೋರಾಪುರ ನಗರಸಭೆ | 10 |

**ಚುನಾವಣಾ ವೇಳಾಪಟ್ಟಿ**

| | | |
|---|---|---|
| 1 | ಜಿಲ್ಲಾಧಿಕಾರಿಗಳು, ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 25-01-2017 ಬುಧವಾರ |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 01-02-2017 ಬುಧವಾರ |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 02-02-2017 ಗುರುವಾರ |
| 4 | ಉಮೇದುವಾರಿಕೆಯನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 04-02-2017 ಶನಿವಾರ |
| 5 | ಮತದಾನ ಅವಶ್ಯವಿದ್ದರೆ, ಮತದಾನ ನಡೆಸಬೇಕಾದ ದಿನಾಂಕ ಮತ್ತು ದಿನ (ಮತದಾನದ ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆಯವರೆಗೆ) | 12-02-2017 ಭಾನುವಾರ |

| | | |
|---|---|---|
| 6 | ಮರುಮತದಾನ ಇದ್ದಲ್ಲಿ ಮರು ಮತದಾನದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆಯವರೆಗೆ) | 14-02-2017 ಮಂಗಳವಾರ |
| 7 | ಮತ ಎಣಿಕೆಯು ಬೆಳಿಗ್ಗೆ 8.00 ಗಂಟೆಯಿಂದ (ತಾಲ್ಲೂಕು ಕೇಂದ್ರಗಳಲ್ಲಿ ) | 15-02-2017 ಬುಧವಾರ |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 15-02-2017 ಬುಧವಾರ |

ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ, ಮಂಡ್ಯ, ಬಳ್ಳಾರಿ ಹಾಗೂ ಯಾದಗಿರಿ ಜಿಲ್ಲೆ ರವರು ಆಯೋಗವು ಆದೇಶಿಸಿರುವ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಮುನಿಸಿಪಾಲಿಟೀಸ್ (ಕೌನ್ಸಿಲರ್‌ಗಳ ಚುನಾವಣೆ) ನಿಯಮಗಳು, 1977 ರ ನಿಯಮ 8 ರ ಪ್ರಕಾರ ಅಧಿಸೂಚನೆಯನ್ನು ಪ್ರಪತ್ರ-1 ರಂತೆ ಹೊರಡಿಸತಕ್ಕದ್ದು. ಹಾಗೆಯೇ ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸತಕ್ಕದ್ದು. ಪ್ರಕಟಿತ ಅಧಿಸೂಚನೆಯನ್ನು ಜಿಲ್ಲಾಧಿಕಾರಿಗಳ ಕಛೇರಿ, ಸಂಬಂಧಪಟ್ಟ ವಾರ್ಡ್ / ನಗರ ಸ್ಥಳೀಯ ಸಂಸ್ಥೆಗಳ ಕಛೇರಿ ಹಾಗೂ ಇನ್ನಿತರ ಮುಖ್ಯ ಸ್ಥಳಗಳಲ್ಲಿಯೂ ಸಹ ಪ್ರಕಟಿಸತಕ್ಕದ್ದು. ಅಧಿಸೂಚನೆಯ ಪ್ರತಿಯನ್ನು ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಪ್ರಪತ್ರ -1 ಎ ರಲ್ಲಿ ಚುನಾವಣಾ ನೋಟೀಸನ್ನು ಪ್ರಕಟಿಸುವಂತೆ ಅವರಿಗೆ ಸೂಚನೆಗಳನ್ನು ನೀಡತಕ್ಕದ್ದು. ಚುನಾವಣೆ ನಡೆಯುವ ವಿಷಯವನ್ನು ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಹಾಗೂ ಸ್ಥಳೀಯ ಪತ್ರಿಕೆಗಳಲ್ಲಿ (ವೆಚ್ಚ ಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು.

ಸದಾಚಾರ ಸಂಹಿತೆಯು ದಿನಾಂಕ: 25-01-2017 ರಿಂದ ಜಾರಿಗೆ ಬಂದಿದ್ದು, ಚುನಾವಣಾ ಪ್ರಕ್ರಿಯೆಯು ಮುಕ್ತಾಯಗೊಳ್ಳುವವರೆಗೆ ಅಂದರೆ ದಿನಾಂಕ: 15-02-2017 ರವರೆಗೆ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡು ವ್ಯಾಪ್ತಿಯಲ್ಲಿ ಮಾತ್ರ ಜಾರಿಯಲ್ಲಿರುತ್ತದೆ. ಸದಾಚಾರ ಸಂಹಿತೆಯು ಯಾವುದೇ ರೀತಿಯಲ್ಲೂ ಉಲ್ಲಂಘನೆಯಾಗದಂತೆ ಜಿಲ್ಲಾ ಚುನಾವಣಾಧಿಕಾರಿಯವರು ಕ್ರಮವಹಿಸತಕ್ಕದ್ದು.

ಆದೇಶಾನುಸಾರ

ಅಧೀನ ಕಾರ್ಯದರ್ಶಿ

ರಾಜ್ಯ ಚುನಾವಣಾ ಆಯೋಗ

18/01/17

ಪ್ರತಿಯನ್ನು :

1. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು ರವರಿಗೆ ಮಾಹಿತಿಗಾಗಿ ಕಳುಹಿಸಿದೆ.
2. ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ, ಮಂಡ್ಯ, ಬಳ್ಳಾರಿ ಹಾಗೂ ಯಾದಗಿರಿ ಜಿಲ್ಲೆ ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
3. ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ರವರಿಗೆ ಈ ಆದೇಶವನ್ನು ಈ ದಿನವೇ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 25 ಪ್ರತಿಗಳನ್ನು ರಾಜ್ಯ ಚುನಾವಣಾ ಆಯೋಗಕ್ಕೆ ಕಳುಹಿಸಿಕೊಡಲು ಕೋರಿದೆ.